ದಿ:11/08 ಹಜ಼
156ನೀತಿ:72 (31)

(3)

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಾ: ಎಂ ಜಿ ಮುಳೆ ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಉತ್ತರ.

**********

ಬಸವಕಲ್ಯಾಣ ಅಭಿವೃದ್ಧಿಗೆ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ರಚಿಸಲಾಗಿದ್ದರೂ ಇದಕ್ಕೆ ಅನುದಾನದ ಕೊರತೆಯಿಂದ ಇದರ ಉದ್ದೇಶ ಸಫಲವಾಗಿಲ್ಲ. ಇಲ್ಲಿ ಸಾಂಸ್ಕೃತಿಕ ಸ್ಮಾರಕಗಳು ಹಾಳಾಗುವ ಸ್ಥಿತಿಗೆ ಬಂದು ತಲುಪಿದೆ. ಶರಣರ ವಚನ ಸಂಗ್ರಹಿಸಿ ಡಿಜಿಟಲ್ ಫಲಕಗಳನ್ನು ಬಸವ ಕಲ್ಯಾಣದಲ್ಲಿ ಅಳವಡಿಸಬೇಕಾಗಿದೆ. ಬಸವ ಕಲ್ಯಾಣದಲ್ಲಿ ಇರುವ ಚಾಲುಕ್ಯರ ಹಳೆಯ ಕೋಟೆ ಅವನತಿಯ ಹಂತ ತಲುಪಿದ. ಬಸವ ಕಲ್ಯಾಣದಲ್ಲಿ ಬಸವ ವನ, ಬಸವ ಉದ್ಯಾನವನ ಈ ರೀತಿಯಾಗಿ ಇಲ್ಲಿ ಆಗಬೇಕಾಗಿರುವ ಹತ್ತು ಹಲವಾರು ಅಭಿವೃದ್ಧಿ ಕಾರ್ಯಗಳ ಬಗ್ಗೆ.

## ಸರ್ಕಾರದ ಉತ್ತರ

ಬಸವಕಲ್ಯಾಣದ ಸಮಗ್ರ ಅಭಿವೃದ್ಧಿಗಾಗಿ 2005ರಲ್ಲಿ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ರಚನೆ ಮಾಡಿ ಬಸವಕಲ್ಯಾಣ ಹಾಗೂ ಸುತ್ತಲಿನ ಪ್ರದೇಶದಲ್ಲಿನ ಒಟ್ಟು 29 ಸಾಂಸ್ಕೃತಿಕ ಸ್ಮಾರಕಗಳನ್ನು ಗುರುತಿಸಿ ಮಂಡಳಿಗೆ ವಹಿಸಲಾಗಿರುತ್ತದೆ. 2005 ರಿಂದ ಇಲ್ಲಿಯವರೆಗೆ ಸುಮಾರು 17 ಸ್ಮಾರಕಗಳ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿರುತ್ತದೆ ಹಾಗೂ ಉಳಿದ ಸ್ಮಾರಕಗಳನ್ನು ಅನುದಾನದ ಲಭ್ಯತೆಯಂತೆ ಹಂತ-ಹಂತವಾಗಿ ಅಭಿವೃದ್ಧಿ ಪಡಿಸುವ ಯೋಜನೆಯಿರುತ್ತದೆ. ಅಲ್ಲದೇ ಪರುಷಕಟ್ಟೆ ಸೇರಿದಂತೆ ನೂತನ ಅನುಭವ ಮಂಟಪ ನಿರ್ಮಾಣ ಯೋಜನೆ ಸರ್ಕಾರದ ಆದೇಶ ಸಂಖ್ಯೆ: ಕಂಇ 169 ಆರ್ ಬಿ ಎ 2023, ದಿನಾಂಕ:26.6.2025ರಲ್ಲಿ ಪರಿಷ್ಕೃತ ಅಂದಾಜು ಮೊತ್ತ ರೂ. 742.00 ಕೋಟಿಗಳಿಗೆ ಅನುಮೋದನೆ ನೀಡಲಾಗಿದ್ದು, ಇಲ್ಲಿಯವರೆಗೆ ರೂ. 325.00 ಕೋಟಿಗಳನ್ನು ಬಿಡುಗಡೆ ಮಾಡಿದ್ದು ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಶರಣರ ವಚನಗಳನ್ನು ಸಂಗ್ರಹಣೆ ಮಾಡುವ ಕೆಲಸ ಪೂರ್ಣಗೊಳಿಸಲಾಗಿದ್ದು ಅವುಗಳನ್ನು ಧ್ವನಿ ಮತ್ತು ದೃಶ್ಯ ಮಾಧ್ಯಮಗಳ ಮೂಲಕ ನೂತನ ಅನುಭವ ಮಂಟಪದ ಒಳಾಂಗಣದಲ್ಲಿ ಅಳವಡಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಚಾಲುಕ್ಯರ ಹಳೆಯ ಕೋಟೆಯಲ್ಲಿ ಕೋಟೆಯ ಇತಿಹಾಸವನ್ನು ಲೈಟ್ ಮತ್ತು ಲೇಸರ್ ಶೋ ಮೂಲಕ ಜನರಿಗೆ ತಿಳಿಸಲಾಗುತ್ತಿದೆ. ಬಸವ ವನ ಉದ್ಯಾನ ವನದ ಸುತ್ತ ತಡೆಗೋಡೆಯನ್ನು ನಿರ್ಮಿಸಲಾಗಿದ್ದು, ಸದರಿ ಸ್ಮಾರಕಗಳ ನಿರ್ವಹಣೆಯನ್ನು ಮಾಡಲಾಗುತ್ತಿದೆ.

ಸಂಖ್ಯೆ: ಕಂಇ 199 ಆರ್ ಬಿ ಎ 2025

(ಕೃಷ್ಣ ಭೈರೇಗೌಡ)
ಕಂದಾಯ ಸಚಿವರು